ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ರಾಜ್ಯದಲ್ಲಿರುವ ಕಲಾವಿದರನ್ನು ಗುರುತಿಸುವ ಕುರಿತು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ):-

1342 (1600) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಲಾವಿದರು ವಿವಿಧ ಕಲೆಗಳಲ್ಲಿ ಗುರುತಿಸಿಕೊಂಡಿರುವ ಬಗ್ಗೆ ಸರ್ಕಾರದಲ್ಲಿ ಮಾಹಿತಿ ಇದೆಯೇ ; ಇದ್ದಲ್ಲಿ, ವಿವರ ನೀಡುವುದು ;

(ಆ) ಈ ಕಲಾವಿದರಿಗೆ ಪ್ರೋತ್ಸಾಹ ನೀಡಲು ಸರ್ಕಾರದಿಂದ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ; (ವಿವರ ನೀಡುವುದು)

(ಇ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅನುಷ್ಠಾನ ಮಾಡಿರುವ ಕಾರ್ಯಕ್ರಮಗಳು ಯಾವುವು ; ವೆಚ್ಚವಾದ ಅನುದಾನ ಹಾಗೂ ಬಳಕೆಯಾಗದೆ ಉಳಿದ ಅನುದಾನ ಎಷ್ಟು ; ಉಳಿಕೆಗೆ ಕಾರಣ ನೀಡುವುದು ; (ಕಳೆದ 3 ವರ್ಷಗಳ ಮಾಹಿತಿ ನೀಡುವುದು)

(ಈ) ಕಳೆದ 3 ವರ್ಷಗಳಲ್ಲಿ ಜಿಲ್ಲೆಯಲ್ಲಿ ಅನುಷ್ಠಾನ ಮಾಡಿರುವ ಕಾರ್ಯಕ್ರಮಗಳು, ವೆಚ್ಚವಾದ ಅನುದಾನ, ಬಳಕೆಯಾಗದೆ ಉಳಿದ ಅನುದಾನ, ಉಳಿಕೆಗೆ ಕಾರಣ ಏನು ?